ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	179 (225)
ಉತ್ತರಿಸುವ ದಿನಾಂಕ	04-03-2020
ಮಾನ್ಯ ಸದಸ್ಯರ ಹೆಸರು	ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ರಾಷ್ಟ್ರೀಯ ಹೆದ್ದಾರಿ ಮುಂತಾದ ಸಾರ್ವಜನಿಕ ಉದ್ದೇಶಗಳಿಗಾಗಿ ಭೂಸ್ವಾಧೀನಪಡಿಸಿಕೊಂಡ ಭೂಮಾಲೀಕರಿಗೆ ನೀಡುವ ಪರಿಹಾರ ಧನದಿಂದ ಅವರು ಬೇರೆ ಜಮೀನು/ ನಿವೇಶನ ಖರೀದಿಸಿದರೆ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕ ವಿನಾಯಿತಿ ಪಡೆಯಲು ಸರ್ಕಾರ ಅಧಿಸೂಚನೆ ಹೊರಡಿಸಿರುವುದು ನಿಜವೇ;	ಹೌದು.
ಆ	ಪರಿಹಾರ ಧನದ ಹಣದಿಂದ ಬೇರೆ ನಿವೇಶನ ಕೊಂಡು ಮುದ್ರಾಂಕ ಶುಲ್ಕವನ್ನು ಕಟ್ಟಿದ್ದು ದಿನಾಂಕ: 10-02-2016ರ ಅಧಿಸೂಚನೆಯಂತೆ ವಿನಾಯಿತಿ ಇರುವುದರಿಂದ ಅದನ್ನು ಮರುಪಾವತಿ ಮಾಡಬೇಕೆಂದು ಅರ್ಜಿ ಸಲ್ಲಿಸಿದರೆ ಅದನ್ನು ನೀಡದೆ ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಇ	ಸರ್ಕಾರದ ಸೌಲಭ್ಯವನ್ನು ಫಲಾನುಭವಿಗಳಿಗೆ ನೀಡದೇ ನಿರಾಕರಿಸುತ್ತಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು ಈ ಜನರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೆ?	ರೈತರಿಂದ ಸ್ಥಿರಾಸ್ತಿ ಭೂಸ್ವಾಧೀನಪಡಿಸಿಕೊಂಡ ವಿವರಗಳು ಹಾಗೂ ಅವರಿಗೆ ನೀಡಿದ ಪರಿಹಾರದ ವಿವರಗಳನ್ನು ಸಂಬಂಧಿಸಿದ ಸಂಸ್ಥೆಗಳ ಸಕ್ಷಮ ಪ್ರಾಧಿಕಾರಿಗಳು ಅಥವಾ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ನೀಡಿದ ಪ್ರಮಾಣ ಪತ್ರವನ್ನು ಉಪ ನೋಂದಣಾಧಿಕಾರಿಗಳ ಮುಂದೆ ನೋಂದಣಿ ಸಮಯದಲ್ಲಿ ಹಾಜರುಪಡಿಸಿದಲ್ಲಿ ಅದರ ಆಧಾರದ ಮೇಲೆ ಮಾತ್ರ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕದಲ್ಲಿ ವಿನಾಯಿತಿ ನೀಡಲಾಗುತ್ತಿದೆ. ದಸ್ತಾವೇಜು ನೋಂದಣಿಯಾದ ನಂತರ ಪ್ರಮಾಣ ಪತ್ರವನ್ನು ಹಾಜರುಪಡಿಸಿದಲ್ಲಿ ಮರುಪಾವತಿ ಮಾಡಲು ಕರ್ನಾಟಕ ಮುದ್ರಾಂಕ ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ.

ಕ್ರ.ಸಂ	ಪ್ರಶ್ನೆ	ಉತ್ತರ
		ನೋಂದಣಿ ಸಮಯದಲ್ಲಿ ಸಕ್ಷಮ ಪ್ರಾಧಿಕಾರ ನೀಡಿದ ಪ್ರಮಾಣ ಪತ್ರವನ್ನು ಹಾಜರುಪಡಿಸದ ಕಾರಣ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕವನ್ನು ಮರುಪಾವತಿ ಮಾಡಲು ಕಾನೂನಿನಲ್ಲಿ ಅವಕಾಶವಿಲ್ಲದ ಕಾರಣ ನಿರಾಕರಿಸಲಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಅವಕಾಶವಿರುವುದಿಲ್ಲ.

ಸಂಖ್ಯೆ: ಕಂಇ/31/ಎಂಎನ್‌ಎಸ್‌ಐ/2020

(ಆರ್.ಅಶೋಕ್)
ಕಂದಾಯ ಸಚಿವರು